**ನಿರ್ದೇಶಕರ ಕಛೇರಿ**

**ಅಲ್ಪಸಂಖ್ಯಾತರ ನಿರ್ದೇಶನಾಲಯ**

**ಕರ್ನಾಟಕ ಸರ್ಕಾರ**

ದೂರವಾಣಿ:080–22864212.
ಫ್ಯಾಕ್ಸ್: 080–22863618.

**Email:directorgokdom@gmail.com**
**Web: www.dom.karnataka.gov.in**
ನಂ:16ಸಿ ಮಿಲ್ಲರ್ ಟ್ಯಾಂಕ್ ಬೆಡ್ ರಸ್ತೆ,
ವಸಂತನಗರ, ಬೆಂಗಳೂರು–560052


ಸಂಖ್ಯೆ:ಅ.ಸಂ.ನಿ/ಶಿ.ವಿ/ದಾ/ಸಿಆರ್–20/2023–24. ದಿನಾಂಕ:24.04.2023

**ರವರಿಗೆ,**

ಎಲ್ಲಾ ಜಿಲ್ಲೆಗಳ ಜಿಲ್ಲಾ ಅಧಿಕಾರಿಗಳು,
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.

**ವಿಷಯ:–** ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ 2023–24ನೇ ಶೈಕ್ಷಣಿಕ ಸಾಲಿನಲ್ಲಿ 6 ನೇ ತರಗತಿ ಪ್ರವೇಶ ಅರ್ಜಿ ಅಹ್ವಾನಿಸಿ ದಾಖಲಾತಿ ಪ್ರಕ್ರಿಯೆ ಕೈಗೊಳ್ಳುವ ಕುರಿತು.

**ಉಲ್ಲೇಖ:** ಸರ್ಕಾರದ ಪತ್ರ ಸಂಖ್ಯೆ: MWD 170 MDS 2023, ದಿನಾಂಕ:24.04.2023.

★★★★★

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ 200 ಮೌಲಾನಾ ಆಜಾದ್ ಮಾದರಿ ಶಾಲೆಗಳು ಕಾರ್ಯನಿರ್ವಹಿಸುತ್ತಿರುತ್ತವೆ. ಪ್ರಸ್ತುತ 2023–24ನೇ ಶೈಕ್ಷಣಿಕ ಸಾಲಿನಲ್ಲಿ 6ನೇ ತರಗತಿ ಪ್ರವೇಶ ಪ್ರಕ್ರಿಯೆಯನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆ ಹಾಗೂ ಸರ್ಕಾರದ ಉಲ್ಲೇಖಿತ ಪತ್ರದಲ್ಲಿ ಭಾರತೀಯ ಚುನಾವಣಾ ಆಯೋಗದ ಸಹಮತಿಯೊಂದಿಗೆ ಪ್ರವೇಶ ಪ್ರಕ್ರಿಯೆಯನ್ನು ಆರಂಭಿಸಲು ಅನುಮತಿ ನೀಡಲಾಗಿರುತ್ತದೆ.

ಮುಂದುವರೆದು, 2023–24ನೇ ಸಾಲಿನಲ್ಲಿ ಪ್ರವೇಶ ಪ್ರಕ್ರಿಯೆಯನ್ನು ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಇವರು ತಮ್ಮ ಅಧೀನದ ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ ಶೇ.100 ರಷ್ಟು ದಾಖಲಾತಿಯನ್ನು ಹೊಂದಲು ತಮ್ಮ ಹಂತದಲ್ಲಿಯೇ ಪತ್ರಿಕಾ ಪ್ರಕಟಣೆ ಹೊರಡಿಸಿ ವ್ಯಾಪಕ ಪ್ರಚಾರ ಕೈಗೊಳ್ಳಲು ಮತ್ತು ನಿಯಾಮಾನುಸಾರ ಮೆರಿಟ್ ಹಾಗೂ ರೋಸ್ಟರ್ ಪ್ರಕಾರ 6ನೇ ತರಗತಿಗೆ ವಿದ್ಯಾರ್ಥಿಗಳನ್ನು ದಾಖಲಿಸಿಕೊಳ್ಳಲು ತಮ್ಮ ಅಧೀನದ ಅಧಿಕಾರಿ/ಸಿಬ್ಬಂದಿಗಳಿಗೆ ಮಾರ್ಗದರ್ಶನ ನೀಡುವುದು. ಈ ಸಂಬಂಧ ಕೈಗೊಳ್ಳಬೇಕಾದ ಕ್ರಮದ ಕುರಿತು ಸಿದ್ಧಪಡಿಸಲಾದ ಮಾರ್ಗಸೂಚಿಯನ್ನು ಈ ಪತ್ರದೊಂದಿಗೆ ಲಗತ್ತಿಸಿದೆ ಹಾಗೂ ಸರ್ಕಾರ, ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಮತ್ತು ಜಿಲ್ಲಾಡಳಿತ ಹೊರಡಿಸುವ ಆದೇಶ, ಸುತ್ತೋಲೆಗಳನ್ವಯ ದಾಖಲಾತಿ ಪ್ರಕ್ರಿಯೆಗಳನ್ನು ದಿನಾಂಕ:28.05.2023ರೊಳಗಾಗಿ ಪೂರ್ಣಗೊಳಿಸಲು ಸೂಚಿಸಿದೆ.

**ವಿ.ಸೂ:–** ಮಂಜೂರಾತಿ ಸಂಖ್ಯೆಗಿಂತ ಹೆಚ್ಚು ಅರ್ಜಿ ಸ್ವೀಕೃತವಾಗಿದಲ್ಲಿ ಮಾತ್ರ ಪ್ರವೇಶ ಪರೀಕ್ಷೆ ನಡೆಸುವುದು ಮತ್ತು ದಿನಾಂಕ:15.05.2023ರ ನಂತರ ಆಯ್ಕೆಪಟ್ಟಿ ಪ್ರಕಟಣೆ ಮತ್ತು ದಾಖಲಾತಿ ಪ್ರಕ್ರಿಯೆಯನ್ನು ನಿಯಮಾನುಸಾರ ಕೈಗೊಳ್ಳುವುದು.

ತಮ್ಮ ವಿಶ್ವಾಸಿ,

24/04/2023

**ನಿರ್ದೇಶಕರು**
**ಅಲ್ಪಸಂಖ್ಯಾತರ ನಿರ್ದೇಶನಾಲಯ,**
**ಬೆಂಗಳೂರು.**

**ಪ್ರತಿಯನ್ನು:–**

1. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
2. ಸಂಬಂಧಪಟ್ಟ ಮುಖ್ಯೋಪಾಧ್ಯಾಯರುಗಳು, ಮೌಲಾನಾ ಆಜಾದ್ ಮಾದರಿ ಶಾಲೆಗಳು– ಇವರಿಗೆ ಸೂಕ್ತ ಕ್ರಮಕ್ಕಾಗಿ, ಮೇಲಾಧಿಕಾರಿಗಳ ಮೂಲಕ.
3. ಕಛೇರಿ ಪ್ರತಿ